# ಜಿಲ್ಲಾ ಪಂಚಾಯತ್ ಕಾರ್ಯಾಲಯ, ಹಾಸನ
# ಮಾಹಿತಿ ಪಡೆಯಲು ಹಕ್ಕು ಅಧಿನಿಯಮ 2005 (ಕೇಂದ್ರ ಕಾಯ್ದೆ 22)

%%%%

ಸೆಕ್ಷನ್ 4(1) (ಎ) ರಂತೆ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಕಾರ್ಯಕ್ರಮಗಳು ಹಾಗೂ ಇನ್ನಿತರೆ ಮಾಹಿತಿಗಳನ್ನು ಗಣಕೀಕರಿಸಿ ಹಾಸನ ಜಿಲ್ಲಾ ವೆಬ್‌ಸೈಟ್‌ನಲ್ಲಿ ಅಳವಡಿಸಿ ಸಾರ್ವಜನಿಕರ ಗಮನಕ್ಕೆ ಪ್ರಚುರಪಡಿಸಿದೆ. ವೆಬ್‌ಸೈಟ್‌ನಲ್ಲಿ ಲಭ್ಯವಾಗುವ ವಿವರಗಳನ್ನು ಅನುಬಂಧ–1 ರಲ್ಲಿ ಲಗತ್ತಿಸಿದೆ.

**ವೆಬ್ ಸೈಟ್ ವಿಳಾಸ:–** **http://hassan.nic.in** **ಅಥವಾ** **http://dpar-rti.kar.nic.in**

ಸೆಕ್ಷನ್ 4(1) (ಬಿ)ರ ಪ್ರಕಾರ ಜಿಲ್ಲಾ ಪಂಚಾಯಿತ್ತಿಯ ಮಾಹಿತಿ ಪಡೆಯಲು ಹಕ್ಕು ಅಧಿನಿಯಮ–2005 (ಕೇಂದ್ರ ಕಾಯ್ದೆ–22) ರನ್ವಯ ಸಂಸ್ಥೆಯ ರಚನೆ, ಕಾರ್ಯಕ್ರಮಗಳು, ಸಂಸ್ಥೆಯ ಕಾರ್ಯಸೂಚಿಗಳನ್ನು ಹಾಗೂ ವಿವರಗಳನ್ನು ಸಾರ್ವಜನಿಕರಿಗೆ ಕೆಳಕಂಡಂತೆ ಪ್ರಚುರಪಡಿಸಿದೆ.

**ಸೆಕ್ಷನ್ 4(1) (ಬಿ) (i) ಪ್ರಕಾರ ಸಂಸ್ಥೆಯ ಹೆಸರು ಕಾರ್ಯಕ್ರಮಗಳು ಹಾಗೂ ಕರ್ತವ್ಯಗಳು:–**

ಜಿಲ್ಲಾ ಪಂಚಾಯಿತ್ತಿಯ ಚುನಾಯಿತ ಪ್ರತಿನಿಧಿಗಳಿಂದ ರಚಿತವಾದ ಸಂಸ್ಥೆಯಾಗಿದ್ದು, ಈ ಸ್ಥಳೀಯ ಸಂಸ್ಥೆಗೆ ಅಧ್ಯಕ್ಷರು ಮುಖ್ಯಸ್ಥರಾಗಿದ್ದು, ಹಲವಾರು ಸ್ಥಾಯಿ ಸಮಿತಿಗಳ ಮೂಲಕ ಅನೇಕ ವಿಷಯಗಳನ್ನು ಚರ್ಚಿಸಿ, ನಿರ್ಣಯ ಕೈಗೊಂಡು ನಂತರ ಸರ್ವಸದಸ್ಯರ ಸಭೆಯಲ್ಲಿ ಇವುಗಳ ಬಗ್ಗೆ ಚರ್ಚಿಸಿ, ಅನುಮೋದಿಸಲಾಗುವುದು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿಯಲ್ಲಿ ಜಿಲ್ಲಾ ಪಂಚಾಯಿತ್ತಿಯು ಕಾರ್ಯನಿರ್ವಹಿಸುತ್ತಿದೆ. ಜಿಲ್ಲಾ ಪಂಚಾಯಿತ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯಿತ್ತಿ ವ್ಯಾಪ್ತಿಗೆ ಬರುವ ಅಧಿಕಾರಿಗಳು ನಿರ್ಣಯಗಳನ್ನು ಜಾರಿಗೆ ತರುತ್ತಾರೆ. ಜಿಲ್ಲಾ ಪಂಚಾಯಿತ್ತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಆಡಳಿತದ ಮುಖ್ಯಸ್ಥರಾಗಿರುತ್ತಾರೆ.